**APRIL 03. 2024**
**ALL INDIA RADIO- DHARWAD**
**PRADESH SAMACHARA (KANNADA) 7:05 AM**

**ಮುಖ್ಯಾಂಶಗಳು:**

- **ರಾಜ್ಯದಲ್ಲಿ ಕಳೆದ ಎರಡು ಲೋಕಸಭಾ ಚುನಾವಣೆಯಲ್ಲಿ ಬಿಜೆಪಿಗೆ ಬರುತ್ತಿರುವ ಶೇಕಡವಾರು ಮತ ಪ್ರಮಾಣ ಹೆಚ್ಚಿದೆ– ಕೇಂದ್ರ ಗೃಹ ಸಚಿವ ಅಮಿತ್ ಶಾ.**

- **ಕಾಂಗ್ರೆಸ್ ಪಕ್ಷ ನುಡಿದಂತೆ ನಡೆದು, ಪಂಚ ಖಾತರಿ ಯೋಜನೆಗಳನ್ನು ಜಾರಿ ಮಾಡಿದೆ– ಮುಖ್ಯಮಂತ್ರಿ ಸಿದ್ದರಾಮಯ್ಯ.**

- **ಲೋಕಸಭಾ ಚುನಾವಣೆ: ಮೊದಲ ಹಂತಕ್ಕೆ ನಾಮಪತ್ರ ಸಲ್ಲಿಕೆ ಚುರುಕು: ಬಿರುಸುಗೊಂಡ ಪ್ರಚಾರ.**

- **ಜಿಲ್ಲಾ ಸ್ವೀಪ್ ಸಮಿತಿಗಳಿಂದ ಮತದಾನ ಜಾಗೃತಿಗಾಗಿ ಹಲವು ಕಾರ್ಯಕ್ರಮಗಳು**

<><><>

**ರಾಜ್ಯದಲ್ಲಿ ಕಳೆದ ಎರಡು ಲೋಕಸಭಾ ಚುನಾವಣೆಯಲ್ಲಿ ಬಿಜೆಪಿಗೆ ಬರುತ್ತಿರುವ ಶೇಕಡವಾರು ಮತ ಪ್ರಮಾಣ ಹೆಚ್ಚಾಗಿದೆ. ಈ ಬಾರಿ ಅತಿ ಹೆಚ್ಚಿನ ಶೇಕಡವಾರು ಮತ ನೀಡುವ ಮೂಲಕ ಎಲ್ಲ 28 ಕ್ಷೇತ್ರಗಳಲ್ಲಿ ಬಿಜೆಪಿ ನೇತೃತ್ವದ ಮೈತ್ರಿ ಅಭ್ಯರ್ಥಿಗಳನ್ನು ಗೆಲ್ಲಿಸಬೇಕು ಎಂದು ಬಿಜೆಪಿ ಹಿರಿಯ ಮುಖಂಡ ಹಾಗೂ ಕೇಂದ್ರ ಗೃಹ ಸಚಿವ ಅಮಿತ್ ಶಾ ಹೇಳಿದ್ದಾರೆ. ಲೋಕಸಭಾ ಚುನಾವಣೆ ಹಿನ್ನೆಲೆಯಲ್ಲಿ ರಾಜ್ಯ ಪ್ರವಾಸ ಕೈಗೊಂಡಿರುವ ಅವರು ಬೆಂಗಳೂರಿನಲ್ಲಿ ನಿನ್ನೆ ಬಿಜೆಪಿ ಶಕ್ತಿ ಕೇಂದ್ರದ ಪ್ರಮುಖರ ಸಮಾವೇಶದಲ್ಲಿ ಪಾಲ್ಗೊಂಡು ಮಾತನಾಡಿದರು. ಪ್ರಧಾನಿ ನರೇಂದ್ರ ಮೋದಿ ನೇತೃತ್ವದ ಬಿಜೆಪಿ ಸರ್ಕಾರ ದೇಶದಲ್ಲಿ ಪಾರದರ್ಶಕ ಹಾಗೂ ಭ್ರ ಷ್ಟಾಚಾರ ರಹಿತ ಆಡಳಿತ ನೀಡಿದೆ. ಇದು ಲೋಕಸಭಾ ಚುನಾವಣೆಯಲ್ಲಿ ಹೆಚ್ಚಿನ ಸ್ಥಾನಗಳನ್ನು ಗೆಲ್ಲಲು ಸಹಕಾರಿಯಾಗಲಿದೆ. ಬೆಂಗಳೂರಿನ ಎಲ್ಲ ನಾಲ್ಕು ಕ್ಷೇತ್ರಗಳನ್ನು ಗೆಲ್ಲಲು ಮುಖಂಡರು, ಕಾರ್ಯಕರ್ತರು ಒಗ್ಗೂಡಿ ಶ್ರಮಿಸಬೇಕು ಎಂದರು.**

<><><>

ಬಿ.ಎಸ್.ಯಡಿಯೂರಪ್ಪ ಮಾತನಾಡಿ, ಜೆಡಿಎಸ್–ಬಿಜೆಪಿ ಜೊತೆಗೂಡಿ ರಾಜ್ಯದ 28 ಲೋಕಸಭಾ ಕ್ಷೇತ್ರಗಳಲ್ಲಿ ಗೆಲುವು ಸಾಧಿಸುವುದು ನಮ್ಮ ಗುರಿ. ರಾಜ್ಯ ಸರ್ಕಾರದಿಂದ ಆಗಿರುವ ಅನ್ಯಾಯದ ಕುರಿತು ಜನರಿಗೆ ಮನವರಿಕೆ ಮಾಡಿಕೊಡಲಾಗುವುದು ಎಂದರು.

<><><>

ಬಿ.ವೈ. ವಿಜಯೇಂದ್ರ ಮಾತನಾಡಿ, ಬಿಜೆಪಿ–ಜೆಡಿಎಸ್ ಜೊತೆಗೂಡಿ ಲೋಕಸಭಾ ಚುನಾವಣೆ ಎದುರಿಸುತ್ತಿರುವುದರಿಂದ ಕಾಂಗ್ರೆಸ್ ಪಕ್ಷಕ್ಕೆ ಭೀತಿ ಉಂಟಾಗಿದೆ. ದೇಶ ಮತ್ತು ರಾಜ್ಯದಲ್ಲಿ ಪ್ರಧಾನಿ ನರೇಂದ್ರ ಮೋದಿ ಅವರ ಅಲೆ ಇರುವ ಹಿನ್ನೆಲೆಯಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ನೇತೃತ್ವದ ಕಾಂಗ್ರೆಸ್ ಸರ್ಕಾರದ ಸಚಿವರು ಸ್ಪರ್ಧೆಯಿಂದ ಹಿಂದೆ ಸರಿದಿದ್ದಾರೆ ಎಂದು ಹೇಳಿದರು.

<><><>

ಬಿಜೆಪಿ ಮತ್ತು ಜೆಡಿಎಸ್ ಪ್ರಮುಖರ ಸಮನ್ವಯ ಸಮಿತಿ ಸಭೆಯಲ್ಲಿಯೂ ಅಮಿತ್ ಶಾ ಪಾಲ್ಗೊಂಡರು. ರಾತ್ರಿ ಚನ್ನಪಟ್ಟಣದಲ್ಲಿ ರೋಡ್ ಶೋ ನಡೆಸಿದ ಅವರು ಬೆಂಗಳೂರು ಗ್ರಾಮಾಂತರ ಲೋಕಸಭಾ ಅಭ್ಯರ್ಥಿ ಡಾ.ಮಂಜುನಾಥ್ ಪರವಾಗಿ ಮತ ಯಾಚಿಸಿದರು.

<><><>

ಕಾಂಗ್ರೆಸ್ ಪಕ್ಷ ನುಡಿದಂತೆ ನಡೆದಿದೆ. ರಾಜ್ಯದಲ್ಲಿ ಸರ್ಕಾರ ರಚನೆಯಾದ ನಂತರ ಪಂಚ ಖಾತರಿ ಯೋಜನೆಗಳನ್ನು ಜಾರಿ ಮಾಡಲಾಗಿದೆ. ಇದರಿಂದ ಎಲ್ಲ ಸಮುದಾಯದ ಬಡ ಜನರಿಗೆ ಅನುಕೂಲವಾಗಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದ್ದಾರೆ. ಮೈಸೂರಿನ ಚಾಮರಾಜ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ ಹಮ್ಮಿಕೊಂಡಿದ್ದ ಕಾಂಗ್ರೆಸ್ ಸಮಾವೇಶದಲ್ಲಿ ಪಾಲ್ಗೊಂಡು ಮಾತನಾಡಿದ ಅವರು; ಮಹಿಳೆಯರಿಗೆ ಉಚಿತ ಪ್ರಯಾಣ, ಅನ್ನಭಾಗ್ಯ ಯೋಜನೆ ಸೇರಿದಂತೆ ಇನ್ನಿತರ ಖಾತರಿ ಯೋಜನೆಗಳು ಜನರ ಆರ್ಥಿಕ ಶಕ್ತಿಯನ್ನು ಹೆಚ್ಚಿಸುವಂತೆ ಮಾಡಿವೆ. ರಾಜ್ಯ ಸರ್ಕಾರ ಸಾಮಾಜಿಕ ನ್ಯಾಯದ ಪರವಾಗಿ ಕೆಲಸ ಮಾಡುತ್ತಿದೆ ಎಂದು ತಿಳಿಸಿದರು. ಸುದ್ದಿಗಾರರೊಂದಿಗೆ ಮಾತನಾಡಿದ ಮುಖ್ಯಮಂತ್ರಿ ಸಿದ್ದರಾಮಯ್ಯ; ರಾಜ್ಯದ ಯಾವುದೇ ಭಾಗದಲ್ಲಿ ಕುಡಿಯುವ ನೀರಿಗೆ ಸಮಸ್ಯೆಯಾಗದಂತೆ ಕ್ರಮ ಕೈಗೊಳ್ಳಲಾಗಿದೆ ಎಂದು ಹೇಳಿದರು. ತೆರಿಗೆ ಹಣದಲ್ಲಿ ರಾಜ್ಯಕ್ಕೆ ನ್ಯಾಯಯುತವಾಗಿ ಸಲ್ಲಬೇಕಾಗಿರುವ ಪಾಲಿನ ಹಣವನ್ನು ಕೇಂದ್ರ ಸರ್ಕಾರ ನೀಡುತ್ತಿಲ್ಲ ಎಂದು ಅವರು ಅಸಮಾಧಾನ ಹೊರ ಹಾಕಿದರು.

<><><>

ಲೋಕಸಭಾ ಚುನಾವಣೆಯಲ್ಲಿ ರಾಜ್ಯದಲ್ಲಿನ ಎಲ್ಲ 28 ಕ್ಷೇತ್ರಗಳಲ್ಲಿ ಕಾಂಗ್ರೆಸ್ ಅಭ್ಯರ್ಥಿಗಳನ್ನು ಬೆಂಬಲಿಸಲು ಆಮ್ ಆದ್ಮಿ ಪಕ್ಷ ಸೇರಿದಂತೆ ಇನ್ನಿತರೆ ಪಕ್ಷಗಳು ತೀರ್ಮಾನಿಸಿವೆ. ಬೆಂಗಳೂರಿನಲ್ಲಿ ನಿನ್ನೆ ಜಂಟಿ ಸುದ್ದಿಗೋಷ್ಠಿಯಲ್ಲಿ ಈ ವಿಷಯ ತಿಳಿಸಿದ ಕೆ.ಪಿ.ಸಿ.ಸಿ. ಅಧ್ಯಕ್ಷ ಡಿ.ಕೆ.ಶಿವಕುಮಾರ್, ಪಕ್ಷದ ತತ್ವ, ಸಿದ್ಧಾಂತ ಒಪ್ಪಿ ಕಾಂಗ್ರೆಸ್ ಪಕ್ಷಕ್ಕೆ ಲಿಖಿತವಾಗಿ ಐ.ಎನ್.ಡಿ.ಐ.ಎ. ಮೈತ್ರಿಕೂಟದ ಪಕ್ಷಗಳಿಂದ ಬೆಂಬಲ ಸೂಚಿಸಿದ್ದಾರೆ ಎಂದು ತಿಳಿಸಿದರು. ಸಮನ್ವಯ ಸಮಿತಿ ರಚಿಸಿ, ಚುನಾವಣಾ ಕಾರ್ಯತಂತ್ರ ರೂಪಿಸಲಾಗುವುದು. ಒಗ್ಗಟ್ಟಾಗಿ ಪ್ರಚಾರ ನಡೆಸಲಾಗುವುದು. ಎಲ್ಲರೂ ಒಗ್ಗೂಡಿ ಚುನಾವಣೆಯಲ್ಲಿ ಗೆಲ್ಲಲು ಪ್ರಯತ್ನಿಸಲಾಗುವುದು ಎಂದು ಹೇಳಿದರು.

<><><>

ಆಮ್ ಆದ್ಮಿ ಪಕ್ಷದ ರಾಜ್ಯಾಧ್ಯಕ್ಷ ಮುಖ್ಯಮಂತ್ರಿ ಚಂದ್ರು ಮಾತನಾಡಿ, ರಾಜ್ಯದಲ್ಲಿನ 28 ಕ್ಷೇತ್ರಗಳಲ್ಲಿ ಕಾಂಗ್ರೆಸ್ ಅಭ್ಯರ್ಥಿಗಳು ಗೆಲ್ಲುವ ನಿಟ್ಟಿನಲ್ಲಿ ಒಗ್ಗಟ್ಟಿನಿಂದ ಪ್ರಚಾರ ನಡೆಸಲಾಗುವುದು ಎಂದು ತಿಳಿಸಿದರು.

<><><>

ಲೋಕಸಭಾ ಚುನಾವಣೆ ಹಿನ್ನೆಲೆಯಲ್ಲಿ ಕರ್ನಾಟಕ ಸೇರಿದಂತೆ 5 ರಾಜ್ಯಗಳಿಗೆ ಕೇಂದ್ರ ಚುನಾವಣಾ ಆಯೋಗವು ವಿಶೇ ' ವೆಚ್ಚ ವೀಕ್ಷಕರನ್ನು ನಿಯೋಜಿಸಿದೆ. ಕರ್ನಾಟಕ, ಆಂಧ್ರಪ್ರದೇಶ, ತಮಿಳುನಾಡು, ಉತ್ತರಪ್ರದೇಶ ಮತ್ತು ಒಡಿಶಾ ರಾಜ್ಯಗಳಿಗೆ ವಿಶೇ ' ವೆಚ್ಚ ವೀಕ್ಷಕರನ್ನು ನಿಯೋಜಿಸಲಾಗಿದ್ದು, ಚುನಾವಣೆಯಲ್ಲಿ ಹಣಬಲದ ಪ್ರಭಾವ ನಿಯಂತ್ರಿಸಲು ಅಗತ್ಯ ಕ್ರಮ ಕೈಗೊಳ್ಳಲಾಗಿದೆ. ಪ್ರತಿ ಅಭ್ಯರ್ಥಿ ತಮಗೆ ನಿಗದಿಪಡಿಸಿದ ಹಣಕಾಸು ವೆಚ್ಚದ ವ್ಯಾಪ್ತಿಯೊಳಗೆ ಚುನಾವಣಾ ಖರ್ಚು ನಿಭಾಯಿಸುವ ಕುರಿತು ವೀಕ್ಷಕರು ನಿಗಾ ವಹಿಸಲಿದ್ದಾರೆ. ವೆಚ್ಚ ವೀಕ್ಷಕರು ರಾಜ್ಯದ ಕೇಂದ್ರ ಕಚೇರಿಯಲ್ಲಿ ಕಾರ್ಯ ನಿರ್ವಹಿಸಲಿದ್ದು, ಅಗತ್ಯವಿದ್ದಲ್ಲಿ ಸಂಬಂಧಪಟ್ಟ ಜಿಲ್ಲೆ ಮತ್ತು ಸ್ಥಳಗಳಿಗೆ ಭೇಟಿ ನೀಡಲಿದ್ದಾರೆ. ಪ್ರತಿ ಲೋಕಸಭಾ ಮತ್ತು ವಿಧಾನಸಭಾಕ್ಷೇತ್ರ ವ್ಯಾಪ್ತಿಯಲ್ಲಿ ನಿಯೋಜಿಸಿರುವ ಸಮನ್ವಯಕಾರರಿಂದ ವೆಚ್ಚ ವೀಕ್ಷಕರು ಅಗತ್ಯ ವಿವರ ಪಡೆಯಲಿದ್ದಾರೆ. ಚುನಾವಣೆಗೆ 72 ಗಂಟೆಗಳ ಮುನ್ನ, ತೀವ್ರ ನಿಗಾ ವಹಿಸಲಿದ್ದು ಎಲ್ಲ ಮಾರ್ಗಸೂಚಿ ಪಾಲನೆ ಹಾಗೂ ಮುಕ್ತ ಮತ್ತು ಶಾಂತಿಯುತ ಮತದಾನ ಖಾತ್ರಿ ಪಡಿಸಲಿದ್ದಾರೆ.

<><><>

ಪ್ರದೇಶ ಸಮಾಚಾರ ಕೇಳುತ್ತಿದ್ದೀರಿ

<><><>

ರಾಜ್ಯದಲ್ಲಿ ಇದೇ 26ರಂದು ನಡೆಯಲಿರುವ ಮೊದಲ ಹಂತದ ಲೋಕಸಭಾ ಚುನಾವಣೆಗೆ ಇಂದು ಒಟ್ಟು 38 ಅಭ್ಯರ್ಥಿಗಳು ನಾಮಪತ್ರ ಸಲ್ಲಿಸಿದ್ದಾರೆ ಎಂದು ಮುಖ್ಯ ಚುನಾವಣಾಧಿಕಾರಿ ಕಚೇರಿ ಪ್ರಕಟಣೆ ತಿಳಿಸಿದೆ. ಇದರಲ್ಲಿ 33 ಪುರು 'ರು, 5 ಮಹಿಳೆಯರು ಸೇರಿದ್ದಾರೆ. ಈವರೆಗೆ 152 ನಾಮಪತ್ರ ಸಲ್ಲಿಕೆಯಾಗಿದೆ. ರಾಜ್ಯದಲ್ಲಿ ಎರಡು ಹಂತದಲ್ಲಿ ನಡೆಯಲಿರುವ ಲೋಕಸಭಾ ಚುನಾವಣಾ ಪ್ರಚಾರ ಬಿರುಸುಗೊಳ್ಳುತ್ತಿದೆ.

<><><>

ಜಿಲ್ಲೆಗಳಲ್ಲಿ ಸ್ವೀಪ್ ಸಮಿತಿಯಿಂದ ಮತದಾನ ಜಾಗೃತಿಗಾಗಿ ಹಲವು ವಿಭಿನ್ನ ಕಾರ್ಯಕ್ರಮಗಳು ನಡೆಯುತ್ತಿವೆ. ಭಾರತ ಚುನಾವಣಾ ಆಯೋಗದ ರಾಜ್ಯ ಸ್ವೀಪ್ ನೋಡಲ್ ಅಧಿಕಾರಿ ಪಿ.ಎಸ್.ವಸ್ತ್ರದ್ ಅವರು ನಿನ್ನೆ ದಕ್ಷಿಣ ಕನ್ನಡ ಜಿಲ್ಲೆಯ ಬಂಟ್ವಾಳ ತಾಲೂಕಿನ ಪಿಲಾತಬೆಟ್ಟು ಗ್ರಾಮ ಪಂಚಾಯತ್ ವ್ಯಾಪ್ತಿಯ ಮತಗಟ್ಟೆಗಳಿಗೆ ಭೇಟಿ ನೀಡಿ ಪರಿಶೀಲನೆ ನಡೆಸಿದರು. ಧ್ಯೇಯ ಆಧಾರಿತ ಪರಿಕಲ್ಪನೆಯಡಿ ನಿರ್ಮಾಣವಾಗುತ್ತಿರುವ ಮತಗಟ್ಟೆ ಸಂಖ್ಯೆ 17ನ್ನು ವೀಕ್ಷಿಸಿ ತಾವೂ ಬಣ್ಣ ಹಚ್ಚಿ ಮೆಚ್ಚುಗೆ ವ್ಯಕ್ತಪಡಿಸಿದರು. ಬಳಿಕ ಮತಗಟ್ಟೆಯಲ್ಲಿನ ಶೌಚಾಲಯ, ಕುಡಿಯುವ ನೀರು, ರ್ಯಾಂಪ್ ವ್ಯವಸ್ಥೆ ಪರಿಶೀಲಿಸಿ ಮತದಾನದ ದಿನದಂದು ಮತದಾರರಿಗೆ ಅಗತ್ಯ ವ್ಯವಸ್ಥೆ ಕಲ್ಪಿಸಲು ಸೂಚಿಸಿದರು.

<><><>

ಲೋಕಸಭಾ ಚುನಾವಣೆ–2024ರ ಹಿನ್ನೆಲೆಯಲ್ಲಿ ಮತದಾನ ಜಾಗೃತಿಗಾಗಿ ಸಹಿ ಸಂಗ್ರಹ ಅಭಿಯಾನ ಕಾರ್ಯಕ್ರಮಗಳು ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಮತ್ತು ಜಿಲ್ಲಾ ಸ್ವೀಪ್ ಸಮಿತಿಯಿಂದ ಮುಂದುವರೆದಿದ್ದು, ಹೊಸಪೇಟೆ ನ್ಯಾಯಾಲಯದ ಸಂಕೀರ್ಣದಲ್ಲಿ ವಕೀಲರ ಸಂಘದ ಸಹಯೋಗದಲ್ಲಿ ನಡೆದ ಮತದಾನ ಜಾಗೃತಿ ಅಭಿಯಾನ ಹಾಗೂ ಮತದಾನ ಜಾಗೃತಿ ಸಹಿ ಸಂಗ್ರಹ ಅಭಿಯಾನಕ್ಕೆ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳಾದ ಸದಾಶಿವ ಪ್ರಭು ಬಿ ಅವರು

ಚಾಲನೆ ಮಾತನಾಡಿ, ಮತದಾನ ಮಾಡುವುದು ನಮಗೆಲ್ಲರಿಗೂ ಸಂವಿಧಾನಬದ್ಧವಾಗಿ ಬಂದಿರುವ ಹಕ್ಕಾಗಿದೆ. ಕಡ್ಡಾಯವಾಗಿ ಪ್ರತಿಯೊಬ್ಬರು ಮತದಾನ ಮಾಡಿ ಉತ್ತಮ ವ್ಯಕ್ತಿಯನ್ನು ಆಯ್ಕೆ ಮಾಡಬೇಕು ಎಂದು ತಿಳಿಸಿದರು. ವಿವಿಧ ನ್ಯಾಯಾಲಯದ ನ್ಯಾಯಾಧೀಶರು, ವಕೀಲರು, ತಾಲೂಕು ಪಂಚಾಯತಿ ಸಿಬ್ಬಂದಿ ಮತ್ತು ಸಾರ್ವಜನಿಕರು ಉಪಸ್ಥಿತರಿದ್ದರು.

<><><>

"ಪ್ರಜಾ ಪ್ರಭುತ್ವ ನಮ್ಮಿಂದ ಮತದಾನ ಹೆಮ್ಮೆಯಿಂದ" ಎನ್ನುವ ಘೋ ' ವಾಕ್ಯದಡಿ ಬಳ್ಳಾರಿ ತಾಲೂಕಿನ ಕುಡುತಿನಿ ಪಟ್ಟಣದ ವ್ಯಾಪ್ತಿಯಲ್ಲಿ ಕಳೆದ ಬಾರಿ ಕಡಿಮೆ ಮತದಾನಗೊಂಡ ಬೂತ್‌ಗಳ ಪ್ರದೇಶದಲ್ಲಿ ಆರೋಗ್ಯ ಸಹಾಯಕರು, ಆಶಾ ಕಾರ್ಯಕರ್ತರು ಹಾಗು ಸಾರ್ವಜನಿಕರು ಸಂಚರಿಸಿ ಮೇ.07 ರಂದು ಖಡ್ಡಾಯವಾಗಿ ಮತ ಚಲಾಯಿಸುವಂತೆ ಮತದಾರಿಗೆ ಅರಿವು ಮೂಡಿಸುವ ಕಾರ್ಯ ನಡೆಯಿತು. ತಪ್ಪದೇ ಮತ ಚಲಾವಣೆ ಮಾಡಬೇಕು ನಿಮ್ಮ ಅಮೂಲ್ಯ ಮತವು ಪಟ್ಟಣದ ಅಭಿವೃದ್ಧಿಗೆ ಪೂರಕವಾಗುತ್ತದೆ ಎಂದು ಪ್ರಾಥಮಿಕ ಆರೋಗ್ಯ ಕೇಂದ್ರದ ಆರೋಗ್ಯಾಧಿಕಾರಿ ಡಾ.ಗುರು ಪ್ರಸಾದ್ ಮತದಾರರಿಗೆ ಮನವಿ ಮಾಡಿದರು.

<><><>

ಲೋಕಸಭಾ ಚುನಾವಣೆ ಸಂದರ್ಭದಲ್ಲಿ ಸಾಮಾಜಿಕ ಜಾಲತಾಣಗಳ ಮೂಲಕ ಮೂಲಕ ಕಾನೂನುಬಾಹಿರ ಮತ್ತು ಸುಳ್ಳು ಸುದ್ದಿಗಳು ಹರಡುವುದನ್ನು ನಿಯಂತ್ರಿಸಲು ಭಾರತ ಚುನಾವಣಾ ಆಯೋಗದ ನಿರ್ದೇಶನದಂತೆ ಜಿಲ್ಲೆಯಲ್ಲಿ ಸಾಮಾಜಿಕ ಜಾಲತಾಣಗಳ ಉಸ್ತುವಾರಿ ಕೋಶಗಳನ್ನು ತೆರೆಯಲಾಗಿದೆ ಎಂದು ಉತ್ತರಕನ್ನಡ ಜಿಲ್ಲಾಧಿಕಾರಿ ಗಂಗೂಬಾಯಿ ಮಾನಕರ ತಿಳಿಸಿದ್ದಾರೆ. ಈ ಬಗ್ಗೆ ಮಾಧ್ಯಮಗಳಿಗೆ ಮಾಹಿತಿ ನೀಡಿರುವ ಅವರು, ನೀತಿ ಸಂಹಿತೆ ಉಲಂಘನೆ ಮಾಡಿ ಸಾಮಾಜಿಕ ಜಾಲತಾಣಗಳಲ್ಲಿ ಪೋಸ್ಟ್ ಮಾಡುವವರ ಮೇಲೆ ನಿಗಾ ಇಡಲು ಸಾಮಾಜಿಕ ಜಾಲತಾಣ ಕೋಶವನ್ನು ಸೈಬರ್ ಪೊಲೀಸ್ ಅಧಿಕಾರಿಗಳ ನೇತೃತ್ವದಲ್ಲಿ ರಚಿಸಲಾಗಿದೆ. ನಿರಂತರ ಕಾರ್ಯನಿರ್ವಹಿಸಲಿದೆ. ಈ ಕೋಶದ ಜಿಲ್ಲಾ ನೋಡಲ್ ಅಧಿಕಾರಿಯಾಗಿ ಪೋಲಿಸ್ ಇಲಾಖೆಯ ಡಿಸಿಬಿ ವಿಭಾಗದ ಇನ್ಸಪೆಕ್ಟರ್ ಹಾಗೂ ಸದಸ್ಯ ಕಾರ್ಯದರ್ಶಿಯಾಗಿ ಜಿಲ್ಲಾ ವಾರ್ತಾಧಿಕಾರಿ ಕಾರ್ಯನಿರ್ವಹಿಸಲಿದ್ದಾರೆ ಎಂದು ತಿಳಿಸಿದ್ದಾರೆ. ಈ ಕೋಶವು ಸಾಮಾಜಿಕ ಜಾಲತಾಣಗಳಾದ ಪೇಸ್ಬುಕ್, ವಾಟ್ಸಪ್, ಟ್ವಿಟರ್, ಟೆಲಿಗ್ರಾಂ, ಇನಸ್ಟಾಗ್ರಾಂ, ಯೂಟ್ಯೂಬ್, ವೆಬ್ ಚಾನೆಲ್‌ಗಳಲ್ಲಿ ಪ್ರಸಾರವಾಗುವ ಎಲ್ಲಾ ಬಗೆಯ ಸುದ್ದಿ ಮತ್ತು ಆಡಿಯೋ ವಿಡಿಯೋ ಸಂದೇಶಗಳ ಮೇಲೆ ಹದ್ದಿನ ಕಣ್ಣು ಇಡುವ ಮೂಲಕ ಸುಳ್ಳು ಸುದ್ದಿಗಳ ನಿಯಂತ್ರಣ ಮಾಡಲಿದೆ.

<><><>

ದಾವಣಗೆರೆ ಲೋಕಸಭಾ ಕ್ಷೇತ್ರದಲ್ಲಿ ಮನೆಯಿಂದಲೇ ಮತದಾನ ಮಾಡಲು 23 ಸಾವಿರದ 670 ಜನ ಹಿರಿಯ ನಾಗರೀಕರು ಮತ್ತು ವಿಶೇಷ ಚೇತನರಿಗೆ 12 ಡಿ ಅರ್ಜಿ ವಿತರಣೆ ಮಾಡಲಾಗಿದೆ ಎಂದು ಜಿಲ್ಲಾ ಚುನಾವಣಾಧಿಕಾರಿ ಡಾ.ಎಂ.ವಿ.ವೆಂಕಟೇಶ್ ಹೇಳಿದ್ದಾರೆ. ಸಹಾಯಕ ಚುನಾವಣಾಧಿಕಾರಿಗಳು ಹಾಗೂ ಅಗತ್ಯ ಸೇವಾ ಮತದಾರರ ನೋಡಲ್ ಅಧಿಕಾರಿಗಳ ಸಭೆಯಲ್ಲಿ ಮಾತನಾಡಿದ ಅವರು, ಕ್ಷೇತ್ರದಲ್ಲಿ 85 ವರ್ಷ ದಾಟಿದ 12 ಸಾವಿರದ 837 ಮತದಾರರಿದ್ದು, ಈ ಪೈಕಿ 7 ಸಾವಿರದ 665 ಮತದಾರರಿಗೆ ಮತ್ತು 22 ಸಾವಿರದ 832 ವಿಶೇಷ ಚೇತನರ ಪೈಕಿ 16 ಸಾವಿರದ 5 ಜನರಿಗೆ 12 ಡಿ ಅರ್ಜಿ ನೀಡಲಾಗಿದೆ ಎಂದರು. ಈಗಾಗಲೇ ಮನೆಯಲ್ಲಿಯೇ ಮತದಾನ ಮಾಡಲು ಒಪ್ಪಿ ಸಲ್ಲಿಸಿರುವ ಮತದಾರರನ್ನು ಆನ್‌ಲೈನ್ ಮೂಲಕ ಮತದಾರರ ಪಟ್ಟಿಯಲ್ಲಿ ನಮೂದಿಸುವ ಕೆಲಸವನ್ನು ಆಯಾ ಕ್ಷೇತ್ರದ ಸಹಾಯಕ ಚುನಾವಣಾಧಿಕಾರಿಗಳು ಮಾಡುತ್ತಿದ್ದಾರೆ ಎಂದು ಮಾಹಿತಿ ನೀಡಿದರು.

<><><>

ಮಂಗಳೂರು ತಾಲೂಕು ಸ್ವೀಪ್ ಸಮಿತಿ ವತಿಯಿಂದ ನಿನ್ನೆ ಮಂಗಳೂರು ನಗರ ದಕ್ಷಿಣ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ಮತದಾನ ಜಾಗೃತಿ ಕಾರ್ಯ ನಡೆಯಿತು. ಕಳೆದ ವಿಧಾನಸಭಾ ಚುನಾವಣೆಯಲ್ಲಿ ಕಡಿಮೆ ಮತದಾನದ ದಾಖಲಿಸಿರುವ ಮತಗಟ್ಟೆಗಳಲ್ಲಿ ಬೀದಿ ನಾಟಕ ಸೇರಿದಂತೆ ವಿವಿಧ ಕಾರ್ಯಕ್ರಮಗಳ ಮೂಲಕ ಮತದಾನದ ಜಾಗೃತಿ ಮೂಡಿಸುವ ಕಾರ್ಯ ನಡೆಯಿತು. ತಾಲೂಕು ಪಂಚಾಯತ್ ಕಾರ್ಯ ನಿರ್ವಾಹಕ ಅಧಿಕಾರಿ ಅಪ್ಪಣ್ಣ ಕಾರ್ಯಕ್ರಮ ಉದ್ಘಾಟಿಸಿದರು. ಕಡಿಮೆ ಮತದಾನ ದಾಖಲಿಸಿರುವ ನಗರದ ಮತಗಟ್ಟೆಗಳ ವ್ಯಾಪ್ತಿಗೆ ಬರುವ ಆಶ್ರಮಗಳು, ಸಂಘ ಸಂಸ್ಥೆಗಳು, ವೈದ್ಯಕೀಯ ಕಾಲೇಜುಗಳಿಗೆ ಭೇಟಿ ನೀಡಿ ಮತದಾನದ ಪ್ರಾಮುಖ್ಯತೆಯನ್ನು ತಿಳಿಸಲಾಯಿತು. ತಾಲೂಕು ಸಮಿತಿ ಸದಸ್ಯರು, ತರಬೇತುದಾರರಾದ ಒ.ಆರ್. ಪ್ರಕಾಶ್, ತಹಸೀನ್ ಮತ್ತಿತರರು ಉಪಸ್ಥಿತರಿದ್ದರು.

<><><>

ಲೋಕಸಭಾ ಸಾರ್ವತ್ರಿಕ ಚುನಾವಣೆ –2024 ಗೆ ಸಂಬಂಧಿಸಿದಂತೆ ಗದಗ ಜಿಲ್ಲೆಯಲ್ಲಿ ಮೇ 7 ರಂದು ಮತದಾನ ಜರುಗಲಿದ್ದು, ಅರ್ಹರೆಲ್ಲರೂ ಕಡ್ಡಾಯವಾಗಿ ಮತದಾನ ಮಾಡಲು ಪ್ರೇರೇಪಿಸಬೇಕೆಂದು ಗದಗ ಜಿಲ್ಲಾಧಿಕಾರಿ ವೈಶಾಲಿ ಎಂ.ಎಲ್. ಅಧಿಕಾರಿಗಳಿಗೆ ತಿಳಿಸಿದ್ದಾರೆ. ಸ್ವೀಪ್ ಸಮಿತಿ ಸಭೆಯನ್ನುದ್ದೇಶಿಸಿ ಅವರು ಮಾತನಾಡಿ; ಪ್ರಜಾಪ್ರಭುತ್ವ ಬಲಿ ್ಟಗೊಳಿಸಲು ಮತದಾನವು ಪ್ರಮುಖ ಪಾತ್ರ ವಹಿಸಲಿದ್ದು, ಅರ್ಹ ಮತದಾರರು ಮತದಾನ ಮಾಡಲು ಹೆಚ್ಚಿನ ಜಾಗೃತಿ ಮೂಡಿಸಬೇಕು. ಈ ನಿಟ್ಟಿನಲ್ಲಿ ಜಿಲ್ಲೆಯ ಬಸ್ ನಿಲ್ದಾಣ, ರೇಲ್ವೆ ಸ್ಟೇ ’ನ್, ಬ್ಯಾಂಕ್, ಆಸ್ಪತ್ರೆಗಳು ಸೇರಿದಂತೆ ವಿವಿಧ ಪ್ರಮುಖ ಹಾಗೂ ಸಾರ್ವಜನಿಕ ಸ್ಥಳಗಳಲ್ಲಿ ಸಾರ್ವಜನಿಕರಿಗೆ ಮತದಾನದ ಕುರಿತು ವ್ಯಾಪಕ ಪ್ರಚಾರ ಕೈಗೊಳ್ಳಬೇಕು. ಜಿಲ್ಲೆಯಲ್ಲಿ ಜರುಗುವ ಜಾತ್ರೆ, ಉತ್ಸವ, ಸಂತೆಗಳಲ್ಲಿಯೂ ಸಹ ಮತದಾನದ ಮಹತ್ವ ಕುರಿತು ಜಾಗೃತಿ ಮೂಡಿಸಬೇಕು ಎಂದು ಅಧಿಕಾರಿಗಳಿಗೆ ಅವರು ನಿರ್ದೇಶನ ನೀಡಿದರು.

<><><>

ಧಾರವಾಡದಲ್ಲಿ ಜಿಲ್ಲಾ ಸ್ವೀಪ್ ಸಮಿತಿ ವತಿಯಿಂದ ಶಿಕ್ಷಣ ಇಲಾಖೆಯ ಸಹಯೋಗದೊಂದಿಗೆ ಧಾರವಾಡದಲ್ಲಿ ಜಿಲ್ಲಾ ಮಟ್ಟದ ಮಾನವ ಸರಪಳಿ ಹಾಗೂ ಸಹಿ ಸಂಗ್ರಹಣೆ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿತ್ತು. ಜಿಲ್ಲಾ ಸ್ವೀಪ್ ಸಮಿತಿ ನೋಡಲ್ ಅಧಿಕಾರಿ ಟಿ.ಕೆ. ಸ್ವರೂಪ ಹಾಗೂ ಹುಬ್ಬಳ್ಳಿ–ಧಾರವಾಡ ಮಹಾನಗರ ಪಾಲಿಕೆಯ ಆಯುಕ್ತ ಡಾ.ಈಶ್ವರ ಉಳ್ಳಾಗಡ್ಡಿ, ಸಹಿ ಸಂಗ್ರಹಣಾ ಅಭಿಯಾನಕ್ಕೆ ಚಾಲನೆ ನೀಡಿದರು.

<><><><><><>